# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೧೨ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೧, ಶಕವರ್ಷ ೧೯೪೭)<br>BENGALURU, FRIDAY, 12 SEPTEMBER, 2025 (BHADRAPADA 21, SHAKAVARSHA 1947) | ನಂ. ೫೭೫<br>No.575 |


## ಕರ್ನಾಟಕ ಸರ್ಕಾರ

ಸಂಖ್ಯೆ: ಹೆಚ್‌ಡಿ 12 ಸಿಎನ್‌ಎ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಡಾ: ಬಿ. ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ: 12.09.2025.

## ಅಧಿಸೂಚನೆ

ಕರ್ನಾಟಕ ಸಿನಿಮಾ (ನಿಯಂತ್ರಣ) ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 23)ರ ಪ್ರಕರಣ 19ರ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಸದರಿ ಪ್ರಕರಣದ ಉಪ-ಪ್ರಕರಣ (1)ರ ಮೂಲಕ ಅಗತ್ಯಪಡಿಸಿರುವಂತೆ, ಕರ್ನಾಟಕ ಸಿನಿಮಾ (ನಿಯಂತ್ರಣ) ನಿಯಮಗಳು, 2014ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಕರಡು ನಿಯಮಗಳನ್ನು ದಿನಾಂಕ:15.07.2025ರಂದು ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಇದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿ ಮತ್ತು ತಿಳುವಳಿಕೆಯನ್ನು 15 ದಿನಗಳೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ ರವರ ಕಛೇರಿಗೆ ಸಲ್ಲಿಸುವಂತೆ ಕಾಲಾವಕಾಶವನ್ನು ಸಹ ನೀಡಲಾಗಿತ್ತು.

ನಿಗಧಿತ ಕಾಲಮಿತಿಯೊಳಗೆ ಸಲ್ಲಿಸಲಾದ ಎಲ್ಲಾ ಆಕ್ಷೇಪಣೆಗಳನ್ನು, ಸಲಹೆಗಳನ್ನು ಸರ್ಕಾರವು ಕೂಲಕುಂಷವಾಗಿ ಪರಾಮರ್ಶಿಸಿ, ಸದರಿ ನಿಯಮವನ್ನು ಅಂತಿಮಗೊಳಿಸಿರುತ್ತದೆ.

## ನಿಯಮಗಳು

**1. ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಸಿನಿಮಾ (ನಿಯಂತ್ರಣ) (ತಿದ್ದುಪಡಿ) ನಿಯಮಗಳು, 2025 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಅವುಗಳ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**2. 55ನೇ ನಿಯಮದ ತಿದ್ದುಪಡಿ.-** ಕರ್ನಾಟಕ ಸಿನಿಮಾ (ನಿಯಂತ್ರಣ) ನಿಯಮಗಳು, 2014ರ (ಇದರಲ್ಲಿ ಇನ್ನುಮುಂದೆ ಸದರಿ ನಿಯಮಗಳು ಎಂದು ಉಲ್ಲೇಖಿಸಲಾಗಿದೆ) 55ನೇ ನಿಯಮದ ಉಪ-ನಿಯಮ (6)ರ ಕೊನೆಯಲ್ಲಿ ಈ ಕೆಳಕಂಡ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು ಮಲ್ಟಿಪ್ಲೆಕ್ಸ್‌ಗಳನ್ನೂ ಒಳಗೊಂಡು ರಾಜ್ಯದ ಎಲ್ಲಾ ಚಿತ್ರಮಂದಿರ (theatre) ಗಳಲ್ಲಿ ಎಲ್ಲಾ ಭಾಷೆಯ ಚಲನಚಿತ್ರಗಳ ಎಲ್ಲಾ ಪ್ರದರ್ಶನಕ್ಕಾಗಿ ಎಲ್ಲಾ ತೆರಿಗೆ ಹೊರತು ಪಡಿಸಿ ಟಿಕೆಟ್ ದರ ಗರಿಷ್ಠ ಮಿತಿ ರೂ.200 (ಎರಡು ನೂರು ರೂಪಾಯಿಗಳು ಮಾತ್ರ)ಗಳನ್ನು ನಿಗಧಿಪಡಿಸಿದೆ."

ಮತ್ತು ಪರಂತು ಎಲ್ಲಾ 75 ಆಸನಗಳು ಅಥವಾ ಅದಕ್ಕಿಂತ ಕಡಿಮೆ ಆಸನಗಳ ಪ್ರೀಮಿಯಂ ಸೌಲಭ್ಯವಿರುವ ಬಹುಪರದೆ ಚಿತ್ರ ಮಂದಿರಗಳನ್ನು ನಿಗಧಿಪಡಿಸಿರುವ ರೂ.200ಗಳ ಗರಿಷ್ಠ ಟಿಕೆಟ್ ದರ ಮಿತಿಯಿಂದ ಹೊರತು ಪಡಿಸಿದೆ.

**3. 146ನೇ ಪ್ರಕರಣವನ್ನು ಬಿಟ್ಟುಬಿಡುವುದು.-** ಸದರಿ ನಿಯಮಗಳಲ್ಲಿನ 146ನೇ ನಿಯಮ ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ

(**ಬಿ.ಕೆ. ಭುವನೇಂದ್ರ ಕುಮಾರ್**)
ಸರ್ಕಾರದ ಅಧೀನ ಕಾರ್ಯದರ್ಶಿ,
(ಸೆರೆಮನೆ & ಸಿನಿಮಾ),
ಒಳಾಡಳಿತ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH
Digitally signed by THAMMAIAH
DN: c=IN, o=Centre for e-Governance, 2.5.4.20=be54f34f4e31eae50203ca7fab5ceb3794f20a8460a2582ef28294d43b8f8b16, ou=department of printing stationery and Publication,CID - 7048443, postalCode=560001, st=Karnataka, serialNumber=4d9b284dcc53d39f1425f50485de07dd86efa302a3fce3729eddea0c1b5098e0, cn=THAMMAIAH
Date: 2025.09.12 16:34:39 +05'30'